# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 168 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14.12.2021 |
| ಉತ್ತರಿಸಬೇಕಾದ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಐಸಿಡಿಎಸ್ ಕೇಂದ್ರ ಸರ್ಕಾರದ ಪುರಸ್ಕೃತ ಯೋಜನೆಯ ಅನ್ವಯ ಎಷ್ಟು ಮಕ್ಕಳಿಗೆ ಚುಚ್ಚುಮದ್ದನ್ನು ನೀಡಲಾಗಿದೆ; ಎಷ್ಟು ಮಕ್ಕಳ ಆರೋಗ್ಯ ತಪಾಸಣೆ ನಡೆಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು). | ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿಯಲ್ಲಿ, ಹುಟ್ಟಿದ ದಿನದಿಂದ ಮೊದಲುಗೊಂಡು ಎಲ್ಲಾ ಮಕ್ಕಳಿಗೂ 12 ಮಾರಕ ರೋಗಗಳಿಂದ ತಡೆಯಬಹುದಾದ ಲಸಿಕೆಗಳನ್ನು ನೀಡಲಾಗುತ್ತದೆ. ಪ್ರಾಥಮಿಕ ಅರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ನಿಯಮಿತವಾಗಿ ಪ್ರತಿ ಗುರುವಾರ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ನಡೆಸಲಾಗುತ್ತಿದೆ ಹಾಗೂ ತಾಲ್ಲೂಕು ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಪ್ರತಿ ದಿನ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ನಡೆಸಲಾಗುತ್ತಿದೆ. ಇದಲ್ಲದೇ ಅಂಗನವಾಡಿ ಕೇಂದ್ರಗಳಲ್ಲಿ ಔಟ್ ರೀಚ್ ಲಸಿಕಾ ಸತ್ರಗಳನ್ನು ನಡೆಸಲಾಗುತ್ತಿದೆ.<br><br>2018-19, 2019-20, 2010-21 ಮತ್ತು 2021-22ನೇ ಸಾಲಿನ (ಅಕ್ಟೋಬರ್-21ರವರೆಗೆ) ಸಂಪೂರ್ಣ ಲಸಿಕಾಕರಣದ ವರದಿಯನ್ನು **ಅನುಬಂಧ-01ರಲ್ಲಿ** ನೀಡಲಾಗಿದೆ.<br><br>ಆರೋಗ್ಯ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ 2019-20, 2020-21 ಮತ್ತು 2021-22ನೇ ಸಾಲಿನಲ್ಲಿ (ಅಕ್ಟೋಬರ್-21ರವರೆಗೆ) 0-6ವರ್ಷದೊಳಗಿನ ಮಕ್ಕಳ ಆರೋಗ್ಯ ತಪಾಸಣೆಯನ್ನು ನಡೆಸಿದ ವರದಿಯನ್ನು **ಅನುಬಂಧ-02ರಲ್ಲಿ** ನೀಡಲಾಗಿದೆ. |

...2